# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ
ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/42/2022-23 ದಿನಾಂಕ : 30-4-2022

ದಿನಾಂಕ: 19-04-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಸಿ.ಲಿಂಗರಾಜೇಗೌಡ | ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು ವಾರ್ಡ್ ಸಂಖ್ಯೆ:143 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 6 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 8 | ಶ್ರೀ.ಡಿ.ಸುರೇಶ | ಎ.ಎಸ್.ಐ ವಿ.ವಿ.ಪುರಂ ಸಂಚಾರಿ ಠಾಣೆ | 9738272397 |
| 9 | ಕೃಷ್ಣಕುಮಾರ್ | ಎ.ಎಸ್.ಐ ವಿ.ವಿ.ಪುರಂ ಸಂಚಾರಿ ಠಾಣೆ | 9980311128 |
| 10 | ಅನ್ನಪೂರ್ಣ | ಎ.ಎಸ್.ಐ ಶಂಕರಪುರಂ ಸಂಚಾರಿ ಠಾಣೆ | 9741864915 |

878

ದಿನಾಂಕ 19-04-2022 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲಿಗೆ ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ. ಓ.ವಿ.ಜಯಕುಮಾರ್ ರವರು ಮಾತನಾಡಿ ಈ ಹಿಂದಿನ ಸಭೆಗಳಲ್ಲಿ ಪ್ರಸ್ತಾಪಿಸಲಾಗಿದ್ದ ಈ ಕೆಳಗಿನ ವಿಷಯಗ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿದರು. ಅವುಗಳೆಂದರೆ 1). ಹಸಿಕಸ ಮತ್ತು ಒಣಕಸವನ್ನು ವಿಂಗಡಿಸಿಕೊಡುವಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು. 2). ಸಜ್ಜನ್‌ರಾವ್ ವೃತ್ತದ ಬಳಿ ಇರುವ ಐಲ್ಯಾಂಡ್‌ನಲ್ಲಿ ಪಾರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕದಂತೆ ತಡೆಯುವುದು. 3). ವಾರ್ಡ್‌ನಲ್ಲಿ ಒಣಗಿದ ಮರದ ಕೊಂಬೆಗಳು ಬೀಳುತ್ತಿರುವ ಬಗ್ಗೆ, 4). ಬೀಡಾಡಿ ಹಸುಗಳನ್ನು ಹಿಡಿಯುವುದು, 5).ಈಸ್ಟ್ ಸರ್ಕಲ್ ರಸ್ತೆಯಲ್ಲಿ ರಸ್ತೆಯ ಎರಡೂ ಬದಿಯಲ್ಲಿ ವಾಹನಗಳನ್ನು ನಿಲ್ಲಿಸುತ್ತಿರುವುದರಿಂದ ಸಂಚರಿಸಲು ತೊಂದರೆಯಾಗುತ್ತಿರುವ ಬಗ್ಗೆ, 6).ಮಾರ್ಕೆಟ್ ರಸ್ತೆ (ಫುಡ್ ಸ್ಟ್ರೀಟ್) ಯಲ್ಲಿನ ಹೋಟೆಲ್ ವ್ಯಾಪಾರಿಗಳಿಗೆ ಶುಚಿತ್ವವನ್ನು ಕಾಪಾಡುವಂತೆ ಕ್ರಮವಹಿಸುವ ಬಗ್ಗೆ. 7). ರಸ್ತೆಯ ಅಗೆತವನ್ನು ಯಾವ ಸಂಸ್ಥೆಯವರು ಮಾಡುತ್ತಾರೆ. ಅವರಿಂದಲೇ Restoration ಮಾಡಿಸುವುದು 8) ಸಜ್ಜನರಾವ್ ವೃತ್ತದ ಸುತ್ತಲೂ ಬೀದಿ ದೀಪಗಳು ಉರಿಯದಿರುವ ಬಗ್ಗೆ, ಮಾನ್ಯ ನೋಡಲ್ ಅಧಿಕಾರಿಗಳು ಈ ಎಲ್ಲಾ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಿ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳೊಂದಿಗೆ ಸಮನ್ವಯತೆ ಸಾಧಿಸಿಕೊಂಡು ಸೂಕ್ತ ಕ್ರಮವನ್ನು ಕೈಗೊಳ್ಳುವಂತೆ ವಾರ್ಡ್‌ನ ಅಭಿಯಂತರರಿಗೆ ಸೂಚಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ. ರಾಜು ರವರು ಮಾತನಾಡಿ ಈ ವಿಷಯಗಳ ಬಗ್ಗೆ ಸೂಕ್ತ ಕ್ರಮವನ್ನು ಕೈಗೊಳ್ಳುವಂತೆ ಕೋರಿದರು. ಅವುಗಳೆಂದರೆ

1.ಕನಕಪುರ ರಸ್ತೆಯಲ್ಲಿ ಹೊಸದಾಗಿ ಬ್ರಾಹ್ಮಿನ್ಸ್ ರಿಫ್ರೆಶ್‌ಮೆಂಟ್ ಹೋಟಲ್ ಪ್ರಾರಂಭವಾಗಿದ್ದು, ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡು ಟೇಬಲ್‌ಗಳನ್ನು ಹಾಕಿ ವ್ಯಾಪಾರ ಮಾಡುತ್ತಿರುವುದನ್ನು

ತೆರವುಗೊಳಿಸುವುದು. 2). ವಾಣಿ ವಿಲಾಸ ರಸ್ತೆ, ವಾಸವಿ ದೇವಸ್ಥಾನದ ರಸ್ತೆ ಮತ್ತು ಕನಕಪುರ ರಸ್ತೆಗಳು ಸೇರುವ ಶೇಷ ಮಹಲ್ ಸರ್ಕಲ್ ಜಂಕ್ಷನ್‌ನಲ್ಲಿ ಮಳೆ ನೀರು ಚರಂಡಿ ತುಂಬಿ ಹೋಗಿದ್ದು, ಹೂಳನ್ನು ತೆಗೆದು ನೀರು ಸರಾಗವಾಗಿ ಹರಿಯುವಂತೆ ಮಾಡುವುದು. 3). ಎಂ.ಎನ್. ಕೃಷ್ಣರಾವ್ ರಸ್ತೆಯ ಪಾದಚಾರಿ ಮಾರ್ಗಕ್ಕೆ ಬೊಲ್ಲಾರ್ಡ್ಸ್‌ಗಳನ್ನು ಅಳವಡಿಸುವುದು. 4). ಎಂ.ಎನ್. ಕೃಷ್ಣರಾವ್ ರಸ್ತೆ ಲಾಲ್‌ಬಾಗ್ ಗ್ರ್ಯಾಂಡ್ ಹೋಟೆಲ್ ಪಕ್ಕದಲ್ಲಿ "LPG Gas Bunk" ಪ್ರಾರಂಭ ಮಾಡುತ್ತಿದ್ದು, ಅಧೀಕೃತವಾಗಿ ಅನುಮತಿ ಪಡೆದಿರುವ ಬಗ್ಗೆ ತಿಳಿಸುವುದು. 5).ಪ್ರೊ॥ ಮಾಧವರಾವ್ ಸರ್ಕಲ್ ಸುತ್ತಾ ಮುತ್ತಾ ತಳ್ಳು ಗಾಡಿಗಳನ್ನು ಬೇಕಾಬಿಟ್ಟು ನಿಲ್ಲಿಸಿಕೊಂಡು ವ್ಯಾಪಾರ ಮಾಡುತ್ತಿದ್ದು, ಇದರಿಂದ ಪಾದಚಾರಿಗಳಿಗೆ ಹಾಗೂ ವಾಹನ ಸವಾರರಿಗೆ ತೊಂದರೆಯಾಗುತ್ತಿರುವ ಬಗ್ಗೆ. 6). ಸ್ವತ್ತಿನ ಸಂಖ್ಯೆ: 90, ಸರ್ವೇಯರ್ ರಸ್ತೆಯ ಮಾಲೀಕರು ಮಂಜೂರಾತಿ ನಕ್ಷೆಯನ್ನು ಉಲ್ಲಂಘಿಸಿ ಕಟ್ಟಡವನ್ನು ನಿರ್ಮಾಣ ಮಾಡುತ್ತಿದ್ದು ಸೂಕ್ತ ಕ್ರಮ ಕೈಗೊಳ್ಳುವ ಬ್ಗಗೆ. 7).ವಾರ್ಡ್ ವ್ಯಾಪ್ತಿಯಲ್ಲಿ ರಾತ್ರಿ ಸಮಯದಲ್ಲಿ ದುಷ್ಕರ್ಮಿಗಳು ಕಟ್ಟಡದ ಅವಶೇಷಗಳನ್ನು ಹಾಕುತ್ತಿರುವ ಬಗ್ಗೆ. ಮಾನ್ ನೋಡಲ್ ಅಧಿಕಾರಿಗಳು ಈ ಎಲ್ಲಾ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗದ ಅಧಿಕಾರಿಗಳು, ಪೋಲೀಸ್ ಇಲಾಖೆಯ ಅಧಿಕಾರಿಗಳು ಹಾಗೂ ಆರೋಗ್ಯ ಇಲಾಖೆ ಅಧಿಕಾರಿಗಳೊಂದಿಗೆ ಸಂಪರ್ಕಸಾಧಿಸಿಕೊಂಡು ಸದರಿ ವಿಷಯಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ಅಭಿಯಂತರರಿಗೆ ಸುಚಿಸಿದರು.

ನಂತರ ಸಭೆಯಲ್ಲಿ ಹಾಜರಿದ್ದ ವಿ.ವಿ.ಪುರಂ ಸಂಚಾರ ಪೊಲೀಸ್ ಠಾಣೆಯ ಪಿ.ಎಸ್.ಐ ರವರು ಮಾತನಾಡಿ ಎಂ.ಎಂ.ವಿ ರಸ್ತೆಯಲ್ಲಿ ಅಪಾಯದ ಸ್ಥಿತಿಯಲ್ಲಿದ್ದ ಮರವನ್ನು ತೆರವುಗೊಳಿಸಲಾಗಿದ್ದು, ಮರದ ತುಂಡುಗಳನ್ನು ಸದರಿ ಸ್ಥಳದಲ್ಲಿಯೇ ಹಾಕಲಾಗಿದ್ದು ಇದರಿಂದ ವಾಹನ ಸವಾರರಿಗೆ ಮತ್ತು ಸಾರ್ವಜನಿಕ ಸಂಚಾರಕ್ಕೆ ತೊಂದರೆಯಾಗುತ್ತಿದ್ದು ಕೂಡಲೇ ಕ್ರಮ ಕೈಗೊಳ್ಳುವಂತೆ ಕೋರಿದರು. ಆಗ ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡಿ ಮರದ ತುಂಡುಗಳನ್ನು ತೆರವುಗೊಳಿಸುವಂತೆ ವಲಯ ಅರಣ್ಯಾಧಿಕಾರಿಗಳನ್ನು ಕೋರುವುದಾಗಿ ತಿಳಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ –143 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)